# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಖಾಲಿ ಇರುವ ಒಂದು ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಅಧೀಕ್ಷಕ ಅಭಿಯಂತರ ಹುದ್ದೆಯನ್ನು ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರ ಹುದ್ದೆಗೆ ಉನ್ನತೀಕರಿಸುವ ಕುರಿತು.

ಓದಲಾಗಿದೆ:
1) ಅಧಿಸೂಚನೆ ಸಂಖ್ಯೆ: ಸಿಐ 88 ಐಎಪಿ 2018, ದಿನಾಂಕ: 25.07.2018.
2) ದಿನಾಂಕ 17.01.2019ರಂದು ನಡೆದ 359ನೇ ಕೆ.ಐ.ಎ.ಡಿ. ಮಂಡಳಿ ಸಭೆಯ ನಡವಳ.
3) ಪತ್ರ ಸಂಖ್ಯೆ: ಕ.ಕೈ.ಪ್ರ.ಅ.ಮಂ/ಕೇಂ.ಕ/ ಆಡಳಿತ-1151(3)/15051/2018-19, ದಿನಾಂಕ 05.02.2019.

---*---

<u>ಪ್ರಸ್ತಾವನೆ:</u>

ದಿನಾಂಕ: 24.08.2006ರಂದು ನಡೆದ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ 275ನೇ ಮಂಡಳಿ ಸಭೆಯಲ್ಲಿ ಬೆಂಗಳೂರು ಮತ್ತು ಧಾರವಾಡ ಕಛೇರಿಗಳನ್ನು ಕೇಂದ್ರ ಸ್ಥಾನವನ್ನಾಗಿ ಮಾಡಿ ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ದರ್ಜೆಯ 2 ಹುದ್ದೆಗಳನ್ನು ಸೃಜಿಸಲಾಗಿದೆ. ದಿನಾಂಕ: 26.12.2009ರ ಆದೇಶ ಸಂಖ್ಯೆ: ಸಿಐ 286 ಎಸ್‌ಪಿಕ್ಯೂ 2008ರಲ್ಲಿ ಕೆ.ಐ.ಎ.ಡಿ.ಬಿ.ಯಲ್ಲಿ ಮೈಸೂರು ಮತ್ತು ಗುಲ್ಬರ್ಗಾ ಕಛೇರಿಗಳನ್ನು ಕೇಂದ್ರ ಸ್ಥಾನವನ್ನಾಗಿ ಮಾಡಿ ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ದರ್ಜೆಯ 2 ಹುದ್ದೆಗಳನ್ನು ಸೃಜಿಸಲಾಗಿದೆ.

ಕೆ.ಐ.ಎ.ಡಿ.ಬಿ.ಯ 4 ಅಧಿಕಾರಿಗಳಿಗೆ ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಅಧೀಕ್ಷಕ ಅಭಿಯಂತರ ಹುದ್ದೆಗೆ ಪದೋನ್ನತಿ ನೀಡಿ, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿಯೇ ತಾತ್ಕಾಲಿಕವಾಗಿ ಮೇಲ್ದರ್ಜೆಗೇರಿಸಿ, ಮೇಲೆ (1)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಆದೇಶ ಹೊರಡಿಸಲಾಗಿದೆ.

ರಾಜ್ಯದ ಕೈಗಾರಿಕೆಗಳ ಸರ್ವತೋಮುಖ ಅಭಿವೃದ್ಧಿಗಾಗಿ ಹಲವು ಪ್ರಮುಖ ಯೋಜನೆಗಳಾದ ಚೆನ್ನೈ-ಬೆಂಗಳೂರು ಕೈಗಾರಿಕಾ ಕಾರಿಡಾರ್ (ತುಮಕೂರು ನೋಡ್), ಬೆಂಗಳೂರು-ಮುಂಬೈ ಎಕನಾಮಿಕ್ ಕಾರಿಡಾರ್, ಪ್ರಮುಖ ನೀರು ಸರಬರಾಜು ಯೋಜನೆಗಳು, ಏರೋಸ್ಪೇಸ್ ಫಿನಿಷಿಂಗ್ ಸೆಂಟರ್, ಇತ್ಯಾದಿ ಯೋಜನೆಗಳನ್ನು ನಿಗಧಿತ ಕಾಲಮಿತಿಯೊಳಗೆ ತ್ವರಿತವಾಗಿ ಅನುಷ್ಠಾನಗೊಳಿಸುವ ಕುರಿತು ಒಟ್ಟಾರೆ ನಿರ್ವಹಣೆ / ಮೇಲುಸ್ತುವಾರಿಯು ಕೆ.ಐ.ಎ.ಡಿ.ಬಿ. ಕೇಂದ್ರ ಕಛೇರಿಯ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರರ ಜವಾಬ್ದಾರಿಯಾಗಿರುತ್ತದೆ.

ಪ್ರಸ್ತುತ ಕೆ.ಐ.ಎ.ಡಿ.ಬಿ.ಯಲ್ಲಿ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರ ದರ್ಜೆಯ ಒಂದು ಹುದ್ದೆಯು ಅಸ್ತಿತ್ವದಲ್ಲಿದ್ದು, ಒಟ್ಟಾರೆ ನಿರ್ವಹಣೆ/

...2)

ಮೇಲುಸ್ತುವಾರಿಗಾಗಿ ಈ ಒಂದು ಹುದ್ದೆಯೊಂದಿಗೆ ಹೆಚ್ಚುವರಿಯಾಗಿ ಮತ್ತೊಂದು ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರ ಹುದ್ದೆಯನ್ನು ತಾತ್ಕಾಲಿಕ / ಶಾಶ್ವತವಾಗಿ ಸೃಜಿಸಲು ಅಗತ್ಯ ಕ್ರಮ ಕೈಗೊಳ್ಳಲು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಸೂಚಿಸಿದ ಮೇರೆಗೆ ದಿನಾಂಕ: 17.01.2019ರಂದು ನಡೆದ ಕೆ.ಐ.ಎ.ಡಿ.ಬಿ. 359ನೇ ಮಂಡಳಿ ಸಭೆಯಲ್ಲಿ ಈ ವಿಷಯವನ್ನು ಕೂಲಂಕಷವಾಗಿ ಚರ್ಚಿಸಿ, ಮಂಡಳಿಯಲ್ಲಿ ಇರುವ 4 ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಅಧೀಕ್ಷಕ ಅಭಿಯಂತರ ಹುದ್ದೆಗಳ ಪೈಕಿ ಖಾಲಿ ಇರುವ ಒಂದು ಹುದ್ದೆಯನ್ನು ಹೆಚ್ಚುವರಿಯಾಗಿ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರ ಹುದ್ದೆಗೆ ಉನ್ನತೀಕರಿಸಲು ಹಾಗೂ ಬಾಕಿ ಉಳಿದ 3 ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಅಧೀಕ್ಷಕ ಅಭಿಯಂತರರ ಕೇಂದ್ರ ಸ್ಥಾನಗಳನ್ನು ಮೈಸೂರು, ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳಿಂದ ಮಂಡಳಿಯ ಕೇಂದ್ರ ಕಛೇರಿಗೆ ಬದಲಾಯಿಸಲು ಮೇಲೆ ಓದಲಾದ (2)ರ ನಡವಳಿಯಲ್ಲಿ ನಿರ್ಣಯಿಸಲಾಗಿದೆ.

ಮಂಡಳಿ ಸಭೆಯ ನಿರ್ಣಯದ ಅನುಸಾರ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಖಾಲಿ ಇರುವ ಒಂದು ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಅಧೀಕ್ಷಕ ಅಭಿಯಂತರ ಹುದ್ದೆಯನ್ನು ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರ ಹುದ್ದೆಗೆ ಉನ್ನತೀಕರಿಸಲು ಸರ್ಕಾರದ ಅನುಮೋದನೆ ನೀಡುವಂತೆ ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ:

**ಸರ್ಕಾರದ ಆದೇಶ ಸಂಖ್ಯೆ: ಸಿಐ 88 ಐಎಪಿ 2018,**
**ಬೆಂಗಳೂರು, ದಿನಾಂಕ: 21.02.2019.**

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಖಾಲಿ ಇರುವ ಒಂದು ಅಧಿಕ ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಅಧೀಕ್ಷಕ ಅಭಿಯಂತರ ಹುದ್ದೆಯನ್ನು ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರ ಹುದ್ದೆಗೆ ಉನ್ನತೀಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Venkatesh 21/2/19.

(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಕೈ.ಅ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿಸಿದ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ (ಕೈಗಾರಿಕಾಭಿವೃದ್ಧಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು ಇವರಿಗೆ ಒದಗಿಸಲು ಕೋರಿದೆ.

ಪ್ರತಿ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
2) ಮುಖ್ಯ ಅಭಿವೃದ್ಧಿ ಅಧಿಕಾರಿ ಹಾಗೂ ಮುಖ್ಯ ಅಭಿಯಂತರರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
3) ಸಹಾಯಕ ಕಾರ್ಯದರ್ಶಿ (ಆಡಳಿತ), ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ನಿರ್ದೇಶಕರು (ತಾಂತ್ರಿಕ ಕೋಶ) ಇವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.